RNU AIR DHARWAD

DECEMBER 22, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳಿಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, 3 ಸಾವಿರದ 450 ಕೋಟಿ ರೂಪಾಯಿ ಮೊತ್ತದ, ವಿವಿಧ ನೀರಾವರಿ ಯೋಜನೆಗಳಿಗೆ ಸಂಪುಟ ಅನುಮೋದನೆ ನೀಡಿದೆ ಎಂದು ಉಪ ಮುಖ್ಯಮಂತ್ರಿ ಮತ್ತು ನೀರಾವರಿ ಖಾತೆ ಸಚಿವ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. 198 ಕೋಟಿ 90 ಲಕ್ಷ ರೂಪಾಯಿ ವೆಚ್ಚದಲ್ಲಿ ಬೆಳಗಾವಿ ಜಿಲ್ಲೆ, ರಾಯಬಾಗ ತಾಲೂಕಿನ, ಕೃಷ್ಣಾ ನದಿಯಿಂದ, ಚಿಕ್ಕೋಡಿ ಶಾಖಾ ಕಾಲುವೆಗೆ ನೀರು ಹರಿಸಲು ಯೋಜನೆ ರೂಪಿಸಲಾಗಿದೆ ಎಂದರು. ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, 990 ಕೋಟಿ ರೂಪಾಯಿ ವೆಚ್ಚದಲ್ಲಿ, ರಾಯಚೂರು ಜಿಲ್ಲೆ ಮಸ್ಕಿ ತಾಲೂಕಿನ ಪಾಮನ ಕಲ್ಲೂರು ಹಾಗೂ ಇತರೆ ಪ್ರದೇಶಗಳಿಗೆ ನಾರಾಯಣಪುರ ಬಲದಂಡೆ ಕಾಲುವೆಯಿಂದ ನೀರಾವರಿ ಸೌಲಭ್ಯ ಸೇರಿದಂತೆ, ಬಾದಾಮಿ, ಬೀಳಗಿ ಮತ ಕ್ಷೇತ್ರ ವ್ಯಾಪ್ತಿಯ, ಕೆರೂರು ಏತ ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><><>

ನಿವೃತ್ತ ನೌಕರರು ತಮ್ಮ ಸೇವೆಯ ಮೂಲಕ ಸಮಾಜ ಹಾಗೂ ಆಡಳಿತ ವ್ಯವಸ್ಥೆಯ ಬುನಾದಿಯನ್ನು ಗಟ್ಟಿಗೊಳಿಸಿದ್ದು, ಅವರ ಅನುಭವ ಹಾಗೂ ತ್ಯಾಗ ಸದಾ ಗೌರವಕ್ಕೆ ಪಾತ್ರವಾಗಬೇಕು ಎಂದು ಅಬಕಾರಿ ಖಾತೆ ಸಚಿವ ಆರ್.ಬಿ. ತಿಮ್ಮಾಪೂರ ಹೇಳಿದರು. ಬಾಗಲಕೋಟೆಯ ಅಂಬೇಡ್ಕರ್ ಭವನದಲ್ಲಿ ಜರುಗಿದ, ನಿವೃತ್ತ ನೌಕರರ ತಾಲೂಕಾ ಸಮಾವೇಶ 2025 ಹಾಗೂ ಗೌರವ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ನಿವೃತ್ತ ನೌಕರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಿ ಪರಿಹಾರ ಒದಗಿಸಲು ಸದಾ ಬದ್ಧವಾಗಿದೆ ಎಂದರು.

<><><>

ಇತಿಹಾಸ ಅಧ್ಯಯನದಲ್ಲಿ ವಿವಿಧ ಕ್ಷೇತ್ರಗಳ ಜನರು ಆಸಕ್ತಿ ತೋರುತ್ತಿರುವುದು ಆಶಾದಾಯಕ ವಿಚಾರವಾಗಿದೆ ಎಂದು, ಹಿರಿಯ ಶಾಸನ ತಜ್ಞ, ಡಾಕ್ಟರ ಶ್ರೀನಿವಾಸ ಪಾಡಿಗಾರ ಅಭಿಪ್ರಾಯಪಟ್ಟರು. ಧಾರವಾಡ ನವೋದಯ ನಗರದಲ್ಲಿ, ಕೇಂದ್ರ ಸರ್ಕಾರದ ಅಧೀನದ, ಹಸ್ತಪ್ರತಿ ಮತ್ತು ಶಾಸನಗಳ ಗಣಕೀಕರಣ ಸಂಸ್ಥೆ–ಎಂ.ಐ.ಡಿ.ಎಫ್ ಘಟಕ– ಡಾಕ್ಟರ ಶ್ರೀನಿವಾಸ ರಿತ್ತಿ ಸ್ಮಾರಕ ಶಾಸನಶಾಸ್ತ್ರ ಸಂಶೋಧನಾಲಯ–ಪ್ರತ್ನಕೀರ್ತಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು. ಎಂ.ಐ.ಡಿ.ಎಫ್ ಸಂಸ್ಥಾಪಕ ನಿರ್ದೇಶಕರಾದ, ಡಾಕ್ಟರ ಹನಸೋಗೆ ಸುದರ್ಶನ ಮಾತನಾಡಿ, ನೂತನ ತಂತ್ರಜ್ಞಾನದ ಸಹಾಯದಿಂದ ಶಾಸನಗಳು ಹಾಗೂ ಹಸ್ತಪ್ರತಿಗಳ, ಡಿಜಿಟಲೀಕರಣ ಮಾಡುವುದು ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ ಎಂದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಚುನಾವಣೆ ಹಾಗೂ ನಗರಸಭೆಯ 21 ನೇ ವಾರ್ಡ್‌ನ ಉಪ ಚುನಾವಣೆ ಶಾಂತಿಯುತವಾಗಿ ನಡೆದಿದ್ದು, ಶೇಕಡ 79 ರ ಷ್ಟು ಮತದಾನ ದಾಖಲಾಗಿದೆ.

<><><>

ಧಾರವಾಡದ ಶ್ರೀ ಮೃತ್ಯುಂಜಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಇಂದು ಬೆಳಗ್ಗೆ ಆರಂಭಗೊಂಡ, ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳ ಸಂಜೆ 4 ಗಂಟೆ ವರೆಗೆ ಜರುಗಲಿದೆ. ಉದ್ಯೋಗ ಆಕಾಂಕ್ಷಿಗಳು ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಅರವಿಂದ ಬೆಲ್ಲದ ಮನವಿ ಮಾಡಿದ್ದಾರೆ.

<><><>

ಜಗತ್ತಿಗೆ ಭಾರತವು ನೀಡಿದ ಯೋಗ ಹಾಗೂ ಧ್ಯಾನವನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ಖಿನ್ನತೆ, ಮಾನಸಿಕ ಒತ್ತಡದಿಂದ ಮುಕ್ತರಾಗಿ ಉತ್ತಮ ಜೀವನ ನಡೆಸಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ ಹೇಳಿದರು. ನಗರದ, ಶಾಸಕರ ಜನಸಂಪರ್ಕ ಕಚೇರಿ ಆವರಣದಲ್ಲಿ ಆಯೋಜಿತ ವಿಶ್ವಧ್ಯಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಖಿನ್ನತೆಯಿಂದ ಮುಕ್ತರಾಗಿ ಜೀವನ ನಡೆಸುವುದೇ, ನಿಜವಾದ ಶ್ರೀಮಂತಿಕೆ ಎಂದರು.

<><><>

ಶಿವಮೊಗ್ಗ ಕೇಂದ್ರ ಕಾರಾಗೃಹದಲ್ಲಿ, ವಿಶ್ವ ಧ್ಯಾನ ದಿನದ ಪ್ರಯುಕ್ತ, ಮನ ಪರಿವರ್ತನಾ ಕಾರ್ಯಕ್ರಮ ಆಯೋಜಿತವಾಯಿತು. ಬ್ರಹ್ಮಕುಮಾರಿ ಸಂಸ್ಥೆಯ ರಾಜಯೋಗಿನಿ ಅನಸೂಯ ಅವರು ಧ್ಯಾನದ ಮಹತ್ವದ ಬಗ್ಗೆ ತಿಳಿವಳಿಕೆ ಮೂಡಿಸಿದರು.

<><><>

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 4 ನೇ ಸುತ್ತಿನ, ಎರಡನೇ ಹಂತದ ಕಂದು ರೋಗ ಲಸಿಕಾ ಕಾರ್ಯಕ್ರಮವು ಇಂದಿನಿಂದ ಆರಂಭವಾಗಿ, 2026 ಜನವರಿ 5 ರವರೆಗೆ ನಡೆಯಲಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

<><><>

ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ, ಈ ವರ್ಷ ವಿವಿಧ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿ, ಒಟ್ಟು 895 ಜನ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸುಧೀರ ಕುಮಾರ ರೆಡ್ಡಿ ತಿಳಿಸಿದ್ದಾರೆ.

<><><>

ಗದಗ ನಗರದ ಕೆ.ಎಚ್ ಪಾಟೀಲ್ ಕ್ರೀಡಾಂಗಣದಲ್ಲಿ ಆಯೋಜಿತ ರಾಜಕ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೆನಿ ಕಾಯಿಟ್ ಪಂದ್ಯಾವಳಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ್ ಉದ್ಘಾಟಿಸಿದರು. ಪಂದ್ಯಾವಳಿಯಲ್ಲಿ 30 ಶೈಕ್ಷಣಿಕ ಜಿಲ್ಲೆಗಳಿಂದ, 300 ಕ್ರೀಡಾಪಟುಗಳು ಪಾಲ್ಗೊಂಡಿದ್ದರು.

<><><>

ರಾಜ್ಯದ ಜಾಗೃತ ಶಕ್ತಿಪೀಠಗಳಲ್ಲಿ ಒಂದಾದ ಉತ್ತರಕನ್ನಡ ಜಿಲ್ಲೆ, ಶಿರಸಿಯ ಮಾರಿಕಾಂಬಾ ದೇವಿಯ ಜಾತ್ರೆ, 2026 ರ ಫೆಬ್ರುವರಿ 24 ರಿಂದ ರಿಂದ ಮಾರ್ಚ 4 ರವರೆಗೆ ಜರುಗಲಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>